# ನೆರೆ ಸಂತ್ರಸ್ತರಿಗೆ ₹10000 ಪರಿಹಾರ

## ರಾಷ್ಟ್ರೀಯ ವಿಪತ್ತು ನಿಧಿಯಿಂದ ₹3800, ರಾಜ್ಯ ಸರ್ಕಾರದಿಂದ ₹6200
## ಪ್ರತಿ ಕುಟುಂಬಕ್ಕೆ 10 ಸಾವಿರ ಪರಿಹಾರ ನೀಡಲು ಸಂಪುಟ ಸಭೆ ನಿರ್ಣಯ

15/8/19

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಭೀಕರ ಪ್ರವಾಹದಿಂದ ತತ್ತರಿಸಿರುವ ನೆರೆ ಸಂತ್ರಸ್ತ ಪ್ರತಿ ಕುಟುಂಬಕ್ಕೆ ತಲಾ 10 ಸಾವಿರ ರು. ಪರಿಹಾರ ನೀಡಲು ರಾಜ್ಯ ಸರ್ಕಾರ ನಿರ್ಧರಿಸಿದೆ.

ರಾಷ್ಟ್ರೀಯ ವಿಪತ್ತು ನಿಧಿಯಿಂದ 3,800 ರು. ಜತೆಗೆ ರಾಜ್ಯ ಸರ್ಕಾರವು 6,200 ರು. ಸೇರಿಸಿ ಒಟ್ಟು 10 ಸಾವಿರ ರು.ಗಳನ್ನು ಪರಿಹಾರ ನೀಡಲು ಬುಧವಾರ ನಡೆದ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ನೇತೃತ್ವದ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಲಾಗಿದೆ. ಪ್ರಕೃತಿ ವಿಕೋಪದಿಂದಾಗಿ ಹಾನಿಗೊಳಗಾದ ಮನೆಗಳಲ್ಲಿನ ಬಟ್ಟೆ-ಬರೆ, ದಿನಬಳಕೆ ವಸ್ತುಗಳು, ಪಾತ್ರೆಗಳು ಇತ್ಯಾದಿ ಗೃಹೋಪಯೋಗಿ ವಸ್ತುಗಳು ಹಾನಿಯಾದರೆ ಕೇಂದ್ರ ಸರ್ಕಾರದ ಎಸ್‌ಡಿಆರ್‌ಎಫ್/ಎಸ್‌ಡಿಆರ್‌ಎಫ್ ಮಾರ್ಗಸೂಚಿಯಂತೆ ಪ್ರತಿ ಕುಟುಂಬಕ್ಕೆ ಬಟ್ಟೆ-ಬರೆ ಹಾನಿಗಾಗಿ 1,800 ರು. ಮತ್ತು ದಿನಬಳಕೆ ವಸ್ತುಗಳಿಗೆ 2 ಸಾವಿರ ರು.ನಂತೆ 3800 ರು. ಮಂಜೂರು ಮಾಡಲು ಅವಕಾಶ ಇದೆ. ರಾಜ್ಯ ಸರ್ಕಾರವು ಹೆಚ್ಚುವರಿಯಾಗಿ 6,200 ರು.ನಂತೆ ಪ್ರತಿ ಸಂತ್ರಸ್ತ ಕುಟುಂಬಗಳಿಗೆ ನೀಡಲು ಸಚಿವ ಸಂಪುಟ ಸಭೆಯಲ್ಲಿ ಒಪ್ಪಿಗೆ ನೀಡಲಾಗಿದೆ.



ರಾಜ್ಯದಲ್ಲಿ ತೀವ್ರ ಪ್ರವಾಹ ಉಂಟಾದ ಪರಿಣಾಮ 4 ಲಕ್ಷ ಜನ ನಿರಾಶ್ರಿತರಾಗಿದ್ದು, ಎರಡು ಲಕ್ಷ ಕುಟುಂಬಗಳಿಗೆ 10 ಸಾವಿರ ರು. ಸಹಾಯಹಸ್ತ ಚಾಚಲು ನಿರ್ಣಯ ಕೈಗೊಳ್ಳಲಾಗಿದೆ. ಇದಕ್ಕೆ 200 ಕೋಟಿ ರು. ವೆಚ್ಚವಾಗಬಹುದು ಎಂದು ಅಂದಾಜಿಸಲಾಗಿದೆ. ಕೇಂದ್ರ ಸರ್ಕಾರದ ರಾಷ್ಟ್ರೀಯ ವಿಪತ್ತು ನಿರ್ವಹಣಾ ನಿಧಿಯಿಂದ 120 ಕೋಟಿ ರು. ಮತ್ತು ರಾಜ್ಯ ಸರ್ಕಾರಕ್ಕೆ 80 ಕೋಟಿ ರು. ಹೊರೆ ಬೀಳಬಹುದು ಎಂದು ಅಂದಾಜಿಸಲಾಗಿದೆ. ಕೇಂದ್ರದಿಂದ ಇನ್ನೂ ಅನುದಾನ ಬಿಡುಗಡೆಯಾಗಿಲ್ಲ. ಅಲ್ಲಿಯವರೆಗೆ ರಾಜ್ಯ ಸರ್ಕಾರವೇ ತನ್ನ ನಿಧಿಯಿಂದ ಬಳಸಿಕೊಳ್ಳಲು ಮುಂದಾಗಿದೆ ಎಂದು ಮೂಲಗಳು ತಿಳಿಸಿವೆ. ಸಂಪೂರ್ಣವಾಗಿ ಮನೆ ಕಳೆದುಕೊಂಡಿರುವ ಕುಟುಂಬಗಳಿಗೆ ಮನೆ ಬಾಡಿಗೆ ಐದು ಸಾವಿರ ರು. ಹಾಗೂ ಸಂತ್ರಸ್ತರು ಮನೆ ನಿರ್ಮಿಸಿಕೊಳ್ಳುವವರೆಗೆ 10 ತಿಂಗಳ ಕಾಲ ಪ್ರತಿ ಕುಟುಂಬಕ್ಕೆ 5 ಸಾವಿರ ರು. ನೀಡುವ ನಿರ್ಣಯ ಕೈಗೊಳ್ಳಲಾಗಿದೆ. ಸಂತ್ರಸ್ತರು ಅವರಲ್ಲಿರುವ ಯಾವುದಾದರೊಂದು ದಾಖಲೆಯನ್ನು ಕೊಟ್ಟು ಬಾಡಿಗೆ ಹಣ ಪಡೆದುಕೊಳ್ಳಲು ಸಂಪುಟ ಸಭೆಯು ಒಪ್ಪಿಗೆ ಸೂಚಿಸಿದೆ.

2